ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ
ಒಟ್ಟು ಪ್ರಶ್ನೆಗಳು – ೧೫

ಪಟ್ಟಿ–೨೮

# ಕರ್ನಾಟಕ ವಿಧಾನ ಪರಿಷತ್ತು

## ನೂರ ಮೂವತ್ತಮೂರನೇ ಅಧಿವೇಶನ
## (ಮುಂದುವರೆದ ಉಪವೇಶನಗಳು)
## ಶುಕ್ರವಾರ, ದಿನಾಂಕ: ೧೭ನೇ ನವೆಂಬರ್, ೨೦೧೭

---

**ಸಮೂಹ – V**

೧. ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಭೂತ ಸೌಲಭ್ಯ ಅಭಿವೃದ್ಧಿ ಸಚಿವರು.
೨. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.
೩. ಉನ್ನತ ಶಿಕ್ಷಣ ಸಚಿವರು.
೪. ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು.
೫. ಸಾರಿಗೆ ಸಚಿವರು.
೬. ಗಣಿ ಮತ್ತು ಭೂವಿಜ್ಞಾನ ಸಚಿವರು.
೭. ಸಣ್ಣ ಕೈಗಾರಿಕೆ ಮತ್ತು ಸಕ್ಕರೆ ರಾಜ್ಯ ಸಚಿವರು.

---

## ಗ್ರಾಮೀಣ ಪ್ರದೇಶಗಳ ಗ್ರಾಮೀಣ ರಸ್ತೆ ಅಭಿವೃದ್ಧಿ ಬಗ್ಗೆ

**ಶ್ರೀ ಸಿ.ಆರ್. ಮನೋಹರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೦೬ (೩೮೯) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಚಿಕ್ಕಬಳ್ಳಾಪುರ ಮತ್ತು ಕೋಲಾರ ಜಿಲ್ಲೆಗಳ ಗ್ರಾಮೀಣ ರಸ್ತೆಗಳನ್ನು ಅಭಿವೃದ್ಧಿಪಡಿಸಲು ಕಳೆದ ೩ ವರ್ಷಗಳಲ್ಲಿ ರಾಜ್ಯ ಸರ್ಕಾರ ನಿಗಧಿಪಡಿಸಿ ಬಿಡುಗಡೆ ಮಾಡಿರುವ ಅನುದಾನದ ಮೊತ್ತವೆಷ್ಟು ; (ವರ್ಷಾವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ರಾಜ್ಯ ಸರ್ಕಾರ ಬಿಡುಗಡೆ ಮಾಡಿರುವ ಅನುದಾನವನ್ನು ಎರಡು ಜಿಲ್ಲೆಗಳ ಎಲ್ಲಾ ತಾಲ್ಲೂಕುಗಳಿಗೆ ಸಮಾನವಾಗಿ ಹಂಚಿಕೆ ಮಾಡಲಾಗಿದೆಯೇ ; (ತಾಲ್ಲೂಕುವಾರು, ವರ್ಷಾವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ರಾಜ್ಯ ಸರ್ಕಾರ ಬಿಡುಗಡೆ ಮಾಡಿರುವ ಅನುದಾನವನ್ನು ಗ್ರಾಮೀಣ ರಸ್ತೆಗಳ ಅಭಿವೃದ್ಧಿಗೆ ಎಲ್ಲಾ ತಾಲ್ಲೂಕುಗಳಲ್ಲಿಯೂ ಸಮರ್ಪಕವಾಗಿ ಬಳಸಿಕೊಳ್ಳಲಾಗಿದೆಯೇ ;

(ಈ) ಹಾಗಿದ್ದಲ್ಲಿ, ರಾಜ್ಯ ಸರ್ಕಾರ ನೀಡಿರುವ ಅನುದಾನದಲ್ಲಿ ಎರಡು ಜಿಲ್ಲೆಗಳ ಎಷ್ಟು ಗ್ರಾಮಗಳ ಗ್ರಾಮೀಣ ರಸ್ತೆಗಳನ್ನು ಅಭಿವೃದ್ಧಿ ಪಡಿಸಲಾಗಿದೆ ; (ತಾಲ್ಲೂಕುವಾರು, ವರ್ಷಾವಾರು ಸಂಪೂರ್ಣ ಮಾಹಿತಿ ನೀಡುವುದು)

(ಉ) ರಾಜ್ಯ ಸರ್ಕಾರ ಗ್ರಾಮೀಣ ರಸ್ತೆಗಳ ಅಭಿವೃದ್ಧಿಗಾಗಿ ನೀಡುತ್ತಿರುವ ಅನುದಾನವನ್ನು ಕೆಲವು ತಾಲ್ಲೂಕುಗಳಲ್ಲಿ ಸಮರ್ಪಕವಾಗಿ ಬಳಸಿಕೊಳ್ಳದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಊ) ಹಾಗಿದ್ದಲ್ಲಿ, ಅಂತಹ ಅಧಿಕಾರಿಗಳ ಮೇಲೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಲ್ಯಾಪ್‌ಟಾಪ್ ಖರೀದಿಸಿರುವ ಬಗ್ಗೆ

**ಶ್ರೀ ರಘುನಾಥರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು)–**

೪೦೭ (೩೯೧೭) ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಕಾಲೇಜು ಶಿಕ್ಷಣ ಮತ್ತು ತಾಂತ್ರಿಕ ಶಿಕ್ಷಣ ಇಲಾಖೆಯ ವತಿಯಿಂದ ವಿದ್ಯಾರ್ಥಿಗಳಿಗೆ ಲ್ಯಾಪ್‌ಟಾಪ್ ವಿತರಿಸಿರುವುದು ನಿಜವೇ ;

(ಆ) ಹಾಗಿದ್ದಲ್ಲಿ, ಇದನ್ನು ಯಾವ ಮಾನದಂಡದ ಆಧಾರದ ಮೇಲೆ ವಿತರಿಸಲಾಗಿದೆ;

(ಇ) ಈವರೆಗೆ ಈ ಇಲಾಖೆಗಳು ಎಷ್ಟು ಲ್ಯಾಪ್‌ಟಾಪ್‌ಗಳನ್ನು ಖರೀದಿಸಿವೆ ; ಪ್ರತಿಯೊಂದು ಲ್ಯಾಪ್‌ಟಾಪ್ ಖರೀದಿಗೆ ತಗುಲಿದ ವೆಚ್ಚವೆಷ್ಟು ; ಈ ಲ್ಯಾಪ್‌ಟಾಪ್‌ನ Configration ಹಾಗೂ ಕಂಪನಿಯ ವಿವರಗಳನ್ನು ನೀಡುವುದು ;

(ಈ) ಈ ಲ್ಯಾಪ್‌ಟಾಪ್‌ಗಳನ್ನು ಈವರೆಗೆ ಎಷ್ಟು ವಿದ್ಯಾರ್ಥಿಗಳಿಗೆ ವಿತರಿಸಲಾಗಿದೆ? (ಪಡೆದ ವಿದ್ಯಾರ್ಥಿಗಳ, ಕಾಲೇಜುವಾರು ಸಂಪೂರ್ಣ ವಿವರ ನೀಡುವುದು)

## ಕಬ್ಬಿಗೆ ವೈಜ್ಞಾನಿಕ ಬೆಲೆ ನಿಗದಿ ಪಡಿಸುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೦೮ (೪೦೩೬) ಸಣ್ಣ ಕೈಗಾರಿಕೆ ಮತ್ತು ಸಕ್ಕರೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿನ ರೈತರ ಕಬ್ಬಿಗೆ ವೈಜ್ಞಾನಿಕ ಬೆಲೆ ನಿಗಧಿ ಮಾಡಲು ಸರ್ಕಾರ ವಿಫಲವಾಗಿರುವ ಹಿನ್ನೆಲೆಯಲ್ಲಿ ಹಾಗೂ ಕಾರ್ಖಾನೆಗಳು ರೈತರ ಕಬ್ಬಿನ ಬಾಕಿ ಹಣ ಪಾವತಿಸಲು ವಿಳಂಬ ಮಾಡುತ್ತಿರುವುದರಿಂದ ರೈತರು ಕಬ್ಬು ಬೆಳೆ ಬೆಳೆಯಲು ಹಿಂದೇಟು ಹಾಕುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ರೈತರ ಕಬ್ಬಿಗೆ ವೈಜ್ಞಾನಿಕ ಬೆಲೆ ನಿಗಧಿ ಮಾಡಲು ಸರ್ಕಾರ ಏನೇನು ಕ್ರಮಗಳನ್ನು ಕೈಗೊಂಡಿದೆ ; ಯಾವ ಕಾಲಮಿತಿಯಲ್ಲಿ ರೈತರ ಕಬ್ಬಿನ ಬೆಳೆಗೆ ವೈಜ್ಞಾನಿಕ ಬೆಲೆ ನಿಗಧಿ ಮಾಡಲಾಗುವುದು ; ಕಬ್ಬು ಅರೆಯುವ ಕಾರ್ಖಾನೆಗಳಿಂದ ರೈತರಿಗೆ ಕಬ್ಬಿನ ಬಾಕಿ ಬಿಲ್ ಪಾವತಿಸಲು ಏನೇನು ಕ್ರಮಗಳನ್ನು ಕೈಗೊಳ್ಳಲಾಗಿದೆ ; (ವಿವರ ನೀಡುವುದು)

(ಇ) ರೈತರಿಗೆ ಪಾವತಿಸಲು ಬಾಕಿ ಉಳಿಸಿಕೊಂಡಿರುವ ಮೊತ್ತವೆಷ್ಟು ; (ಕಾರ್ಖಾನೆವಾರು ವಿವರ ನೀಡುವುದು) ಯಾವ ಕಾಲಮಿತಿಯಲ್ಲಿ ರೈತರ ಕಬ್ಬಿನ ಬಾಕಿ ಹಣ ಪೂರ್ಣ ಪಾವತಿಸಲಾಗುವುದು ;

(ಈ) ರಾಜ್ಯದಲ್ಲಿ ೨೦೧೫–೧೬ ಹಾಗೂ ೨೦೧೬–೧೭ನೇ ಸಾಲಿನಲ್ಲಿ ಎಷ್ಟು ಹೆಕ್ಟೇರ್ ಪ್ರದೇಶದಲ್ಲಿ ಕಬ್ಬು ಬೆಳೆಯಲಾಗಿತ್ತು ; ೨೦೧೭–೧೮ನೇ ಸಾಲಿನಲ್ಲಿ ಎಷ್ಟು ಹೆಕ್ಟೇರ್ ಪ್ರದೇಶದಲ್ಲಿ ಕಬ್ಬು ಬೆಳೆ ಬೆಳೆಯಲಾಗಿದೆ ? (ವಿವರ ನೀಡುವುದು)

## ಬಸ್ಸುಗಳಲ್ಲಿ ಅನೈತಿಕ ಚಟುವಟಿಕೆಯನ್ನು ನಿಯಂತ್ರಿಸುವ ಬಗ್ಗೆ

**ಡಾ: ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) –**

೪೮೯ (೪೧೧೮) ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯ ಸರ್ಕಾರದ ಸರ್ಕಾರಿ ಬಸ್ಸುಗಳು ಹಾಗೂ ಖಾಸಗಿ ಬಸ್ಸುಗಳಲ್ಲಿ ಮಲಗಲು ಅನುಕೂಲವಾಗುವಂತೆ ಸ್ಲೀಪರ್ ಕೋಚ್‌ಗಳಲ್ಲಿ ಪರದೆಗಳನ್ನು ನಿರ್ಮಿಸಿದೆ, ಇದನ್ನು ದುರ್ಬಳಕೆ ಮಾಡಿಕೊಂಡು ಕೆಲವು ಪ್ರಯಾಣಿಕರು ಅನೈತಿಕ ಚಟುವಟಿಕೆಗಳಲ್ಲಿ ತೊಡಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇವುಗಳನ್ನು ನಿಯಂತ್ರಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಆ) ಈ ಅನೈತಿಕ ಚಟುವಟಿಕೆಗಳನ್ನು ನಿಯಂತ್ರಿಸಲು ಸರ್ಕಾರ ಬಸ್ಸುಗಳಲ್ಲಿ ಅಳವಡಿಸಿದ ಪರದೆಗಳನ್ನು ತೆಗೆದು ಹಾಕಲು ಹಾಗೂ ಸಿ.ಸಿ.ಟಿ.ವಿ.ಯನ್ನು ಅಳವಡಿಸಲು ಚಿಂತಿಸಿದೆಯೇ ;

(ಇ) ಇಂತಹ ಅನೈತಿಕ ಚಟುವಟಿಕೆ ತಡೆಯಲು ಕೆ.ಎಸ್.ಆರ್.ಟಿ.ಸಿ. ಚೆಕ್ಕಿಂಗ್ ತಪಾಸಣಾ ತಂಡ ಮತ್ತು ಆರ್.ಟಿ.ಓ.ಗಳು ಅನಿರೀಕ್ಷಿತ ತಪಾಸಣೆ ಮಾಡುವಂತೆ ಸರ್ಕಾರ ಯಾವ ಕ್ರಮ ಕೈಗೊಳ್ಳುವುದು ?

## ನಮ್ಮ ಗ್ರಾಮ ನಮ್ಮ ರಸ್ತೆ ಯೋಜನೆಯ ಬಗ್ಗೆ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೧೦ (೩೮೭೫) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ನಮ್ಮ ಗ್ರಾಮ ನಮ್ಮ ರಸ್ತೆ ಯೋಜನೆಯಡಿಯಲ್ಲಿ ನಿರ್ಮಾಣ ಮಾಡಲಾದ ರಸ್ತೆಗಳು ಎಷ್ಟು ; ಈ ಕಾಮಗಾರಿಗಳು ಕಳಪೆ ಮಟ್ಟದಿಂದ ನಿರ್ಮಾಣವಾಗಿದೆ ಮತ್ತು ಸರ್ಕಾರದ ಮಾರ್ಗಸೂಚಿಯನ್ನು ಅನುಸರಿಸದೇ ರಸ್ತೆ ನಿರ್ಮಾಣ ಮಾಡಿದೆ ಎಂಬ ಗಂಭೀರ ಆರೋಪವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಆ) ಕಳೆದ ೫ ವರ್ಷಗಳಲ್ಲಿ ಎಷ್ಟು ರಸ್ತೆಗಳ ನಿರ್ಮಾಣವನ್ನು ಮಾಡಲಾಗಿದೆ ; (ವರ್ಷವಾರು ವಿವರ ನೀಡುವುದು)

(ಇ) ಈ ರಸ್ತೆಗಳ ನಿರ್ಮಾಣಕ್ಕಾಗಿ ಪ್ರತಿವರ್ಷ ಸರ್ಕಾರ ನಿಗಧಿಪಡಿಸಿದ ಅನುದಾನವೆಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಈ) ಪ್ರತಿವರ್ಷ ಎಷ್ಟು ರಸ್ತೆ ನಿರ್ಮಾಣದ ಗುರಿಯನ್ನು ಸರ್ಕಾರ ನಿಗಧಿಪಡಿಸಿದೆ; ನಿರ್ಮಾಣ ಪೂರ್ಣಗೊಂಡ ರಸ್ತೆಗಳು ಎಷ್ಟು ; ಇನ್ನೂ ಎಷ್ಟು ರಸ್ತೆಗಳನ್ನು ನಿರ್ಮಾಣ ಮಾಡಬೇಕಾಗಿರುತ್ತದೆ ? (ವಿವರ ನೀಡುವುದು)

## ಹಂಪಿ ಕನ್ನಡ ವಿಶ್ವವಿದ್ಯಾಲಯದ ಅಭಿವೃದ್ಧಿ ಅನುದಾನದ ಬಗ್ಗೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) –**

೪೧೧ (೪೯೧೦) ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಹಂಪಿ ಕನ್ನಡ ವಿಶ್ವವಿದ್ಯಾನಿಲಯಕ್ಕೆ ಅಭಿವೃದ್ಧಿ ಅನುದಾನವೆಂದು ಪ್ರತಿ ವರ್ಷ ಸರ್ಕಾರದಿಂದ ನೀಡಲಾಗುತ್ತಿರುವ ಹಣ ಎಷ್ಟು ; ಕಳೆದ ಮೂರು ವರ್ಷಗಳ ವಿವರ ನೀಡುವುದು ;

(ಆ) ಈ ಸಾಲಿನಲ್ಲಿ ನೀಡಬೇಕಾಗಿದ್ದ ಅಭಿವೃದ್ಧಿ ಅನುದಾನವನ್ನು ಇದುವರೆವಿಗೂ ಬಿಡುಗಡೆ ಮಾಡಿಲ್ಲ ಎನ್ನುವುದು ನಿಜವೇ ; ನೀಡಿದ್ದಲ್ಲಿ, ಯಾವಾಗ ನೀಡಲಾಯಿತು ;

(ಇ) ಸದರಿ ವಿಶ್ವವಿದ್ಯಾನಿಲಯದ ಬೆಳ್ಳಿ ಹಬ್ಬದ ಆಚರಣೆಗೆ ಆಯವ್ಯಯದಲ್ಲಿ ಘೋಷಣೆ ಮಾಡಿದ ಹಣ ಎಷ್ಟು ; (ವಿವರ ನೀಡುವುದು) ಘೋಷಣೆ ಮಾಡಿದ ಪ್ರಕಾರ

ನೀಡಬೇಕಾಗಿರುವ ಹಣದಲ್ಲಿ ಕಡಿತಗೊಳಿಸುವಂತೆ ಆದೇಶ ಬಂದಿರುವುದು ನಿಜವೇ ? (ವಿವರ ನೀಡುವುದು)

## ಚರ್ಚುಗಳ ನವೀಕರಣ ಮತ್ತು ರಿಪೇರಿಗಾಗಿ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೧೨ (೪೧೨೪) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಮೈಸೂರು ಜಿಲ್ಲೆಯಲ್ಲಿ ಚರ್ಚುಗಳ ರಿಪೇರಿ ಮತ್ತು ನವೀಕರಣಕ್ಕಾಗಿ ಹಣ ಬಿಡುಗಡೆ ಮಾಡಲು ಕೋರಿ ಎಷ್ಟು ಅರ್ಜಿಗಳು ಬಂದಿವೆ ; ಬಿಡುಗಡೆ ಮಾಡಲಾಗಿರುವ ಹಣ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಟಿ. ನರಸೀಪುರ ಪಟ್ಟಣದ ತ್ರಿವೇಣಿ ನಗರದಲ್ಲಿರುವ ಯೇಸು ಬಾಲರ ಚರ್ಚ್ ನವೀಕರಣಕ್ಕಾಗಿ ಹಣ ಬಿಡುಗಡೆಗಾಗಿ ಬೇಡಿಕೆ ಇಟ್ಟಿದ್ದರೂ ಸರ್ಕಾರ ಈವರೆವಿಗೆ ಮಂಜೂರು ಮಾಡದಿರುವುದಕ್ಕೆ ಕಾರಣಗಳೇನು ; ಯಾವ ಕಾಲಮಿತಿಯೊಳಗೆ ಮಂಜೂರು ಮಾಡಲು ಉದ್ದೇಶಿಸಲಾಗಿದೆ ?

## ೧೯೯೫ರ ಪೂರ್ವದಲ್ಲಿನ ಖಾಸಗಿ ಶಾಲಾ ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸುವ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) –**

೪೧೩ (೪೦೪೪) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ೧೯೯೫ ಕ್ಕೂ ಪೂರ್ವದಲ್ಲಿನ ಎಷ್ಟು ಶಾಲಾ ಕಾಲೇಜುಗಳು ವೇತನಾನುದಾನಕ್ಕೆ ಒಳಪಟ್ಟಿರುವುದಿಲ್ಲ ; (ಪ್ರಾಥಮಿಕ, ಪ್ರೌಢ ಶಿಕ್ಷಣ, ಪದವಿಪೂರ್ವ ಕಾಲೇಜುಗಳ ಪ್ರತ್ಯೇಕ ವಿವರ ನೀಡುವುದು)

(ಆ) ಈ ಶಾಲಾ ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸದಿರುವುದಕ್ಕೆ ಕಾರಣವೇನು;

(ಇ) ವೇತನಾನುದಾನಕ್ಕೆ ಒಳಪಡಿಸಲು ನಿಗಧಿಪಡಿಸಿರುವ ಮಾನದಂಡಗಳನ್ನು ಸಡಿಲಿಕೆ ಮಾಡಿ ಅನುದಾನಕ್ಕೆ ಒಳಪಡಿಸಲು ಸರ್ಕಾರ ಕೈಗೊಂಡ ಕ್ರಮವೇನು;

(ಈ) ಯಾವ ಕಾಲಮಿತಿಯೊಳಗೆ ಈ ಶಾಲಾ–ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸಲಾಗುವುದು ?

## ಖಾಸಗಿ ಪಾಲಿಟೆಕ್ನಿಕ್‌ಗಳನ್ನು ವೇತನಾನುದನಕ್ಕೆ ಒಳಪಡಿಸುವ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) –**

೪೧೪ (೪೧೩೧) ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ೩೩ ಪಾಲಿಟೆಕ್ನಿಕ್‌ಗಳನ್ನು ವೇತನಾನುದಾನಕ್ಕೆ ಒಳಪಡಿಸುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ ;

(ಆ) ಈ ಪಾಲಿಟೆಕ್ನಿಕ್‌ಗಳನ್ನು ವೇನತಾನುದಾನಕ್ಕೆ ಒಳಪಡಿಸುವ ಬಗ್ಗೆ ಸಚಿವ ಸಂಪುಟ ಉಪಸಮಿತಿಯನ್ನು ರಚಿಸಲಾಗಿದ್ದು ಯಾವಾಗ ;

(ಇ) ಸಚಿವ ಸಂಪುಟ ಉಪಸಮಿತಿಯು ಇಲ್ಲಿಯವರೆಗೆ ಎಷ್ಟು ಸಲ ಸಭೆ ಸೇರಿ ಚರ್ಚಿಸಿದೆ ;

(ಈ) ಯಾವ ಕಾಲಮಿತಿಯೊಳಗೆ ಈ ಪಾಲಿಟೆಕ್ನಿಕ್‌ಗಳನ್ನು ವೇತನಾನುದನಕ್ಕೆ ಒಳಪಡಿಸಲು ಕ್ರಮ ಜರುಗಿಸಲಾಗುವುದು ?

## ಗುತ್ತಿಗೆ ನೌಕರರ ಸೌಲಭ್ಯಗಳ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೧೫ (೪೧೪೪) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಅನೇಕ ವರ್ಷಗಳಿಂದ ದುಡಿಯುತ್ತಿರುವ ಗ್ರಾಮ ಪಂಚಾಯಿತಿ ನೌಕರರಿಗೆ ಯಾವುದೇ ಸೌಲಭ್ಯ ನೀಡದೆ ಇರುವುದರಿಂದ ನಿಯಮಾವಳಿ ರೂಪಿಸಿ ಈ ಎಲ್ಲಾ ಸೌಲಭ್ಯದೊಂದಿಗೆ ಜೀವನ ಭದ್ರತೆ ಕಲ್ಪಿಸುವ ಕುರಿತು ಸರ್ಕಾರದ ನಿಲುವೇನು ;

(ಆ) ತಾಲ್ಲೂಕು ಹಾಗೂ ಜಿಲ್ಲಾ ಪಂಚಾಯಿತಿಗಳಲ್ಲಿ ಕರ್ತವ್ಯ ನಿರ್ವಹಿಸುವ ಗುತ್ತಿಗೆ ನೌಕರರ ಸಂಖ್ಯೆ ಎಷ್ಟು ;

(ಇ) ಗ್ರಾಮ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ ಹಾಗೂ ಜಿಲ್ಲಾ ಪಂಚಾಯಿತಿಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಗುತ್ತಿಗೆ, ಹೊರಗುತ್ತಿಗೆ ನೌಕರರನ್ನು ಖಾಯಂಗೊಳಿಸಿ ಅಗತ್ಯ ಸೌಲಭ್ಯಗಳನ್ನು ನೀಡುವ ಕುರಿತು ಸರ್ಕಾರದ ನಿಲುವೇನು ; ಈ ಕುರಿತು ಸರ್ಕಾರ ಯಾವ ಕ್ರಮ ಕೈಗೊಂಡಿದೆ ?

## ಪ್ರಾಥಮಿಕ ಮತ್ತು ಪ್ರೌಢ ಶಾಲೆಯ ಕೊಠಡಿಗಳ ದುರಸ್ಥಿ ಬಗ್ಗೆ

**ಶ್ರೀ ಬಸವರಾಜ ಪಾಟೀಲ್ ಇಟಗಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೧೬ (೩೯೧೪) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಯಚೂರು ಮತ್ತು ಕೊಪ್ಪಳ ಜಿಲ್ಲೆಗಳಲ್ಲಿ ಎಷ್ಟು ಶಾಲಾ ಕೊಠಡಿಗಳು ಶಿಥಿಲಗೊಂಡಿವೆ ; (ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಅವುಗಳನ್ನು ದುರಸ್ಥಿ ಮಾಡಲು ಕ್ರಮ ತೆಗೆದುಕೊಳ್ಳಲಾಗಿದೆಯೇ ; (ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಎಷ್ಟು ಹೊಸ ಶಾಲಾ ಕೊಠಡಿಗಳನ್ನು ನಿರ್ಮಿಸಲಾಗುವುದು ? (ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿ ನೀಡುವುದು)

## ಡೀಮ್ಡ್ ವಿಶ್ವವಿದ್ಯಾಲಯ ಕುರಿತು

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ) –**

೪೧೭ (೪೨೯೫) ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯ ಸರ್ಕಾರವು ರಾಜ್ಯದಲ್ಲಿ ಡೀಮ್ಡ್ ವಿಶ್ವವಿದ್ಯಾಲಯವಾಗಿ ಡಾ. ಅಂಬೇಡ್ಕರ್ ಸ್ಕೂಲ್ ಆಫ್ ಎಕನಾಮಿಕ್ಸ್ ತೆರೆಯಲು ಸಚಿವ ಸಂಪುಟದ ಮೂಲಕ ಎಷ್ಟು ಹಣವನ್ನು ಮಂಜೂರು ಮಾಡಿರುತ್ತದೆ ; ಸದರಿ ಸಂಸ್ಥೆಯನ್ನು ಡೀಮ್ಡ್ ವಿಶ್ವವಿದ್ಯಾಲಯವಾಗಿ ಜಾರಿಗೊಳಿಸಲು ರಾಜ್ಯ ಸರ್ಕಾರದಿಂದ ಕಾಯ್ದೆ ಅಥವಾ ಆದೇಶವನ್ನು ಹೊರಡಿಸಲಾಗಿದೆಯೇ ;

(ಆ) ಡಾ. ಅಂಬೇಡ್ಕರ್ ಸ್ಕೂಲ್ ಆಫ್ ಎಕನಾಮಿಕ್ಸ್ ಸಂಸ್ಥೆಯು ನಿಯಮಾವಳಿ ಅನ್ವಯ ಇದ್ದು, ಕಾಲೇಜು ಶಿಕ್ಷಣ ನಿರ್ದೇಶನಾಲಯದ ವ್ಯಾಪ್ತಿಗೆ ಬರುತ್ತದೆಯೇ; ಪ್ರಸ್ತುತ ಯಾವ ವಿಶ್ವವಿದ್ಯಾಲಯದ ಅಡಿಯಲ್ಲಿ ಈ ಸಂಸ್ಥೆ ಕಾರ್ಯನಿರ್ವಹಿಸುತ್ತಿದೆ; ಸದರಿ ಸಂಸ್ಥೆಗೆ ಎಷ್ಟು ಅವಧಿಗೆ ಹಾಲಿ ನಿರ್ದೇಶಕರನ್ನು ನೇಮಕ ಮಾಡಲಾಗಿದೆ;

(ಇ) ಈ ಸಂಸ್ಥೆಗೆ ಅಂದಾಜು ಮಾಡಿರುವ ಕಾಮಗಾರಿಗಳ ಒಟ್ಟು ಮೊತ್ತ ಎಷ್ಟು; ಈ ಕಾಮಗಾರಿಗಳನ್ನು ಯಾವ ಸಂಸ್ಥೆಗೆ ವಹಿಸಲಾಗಿದೆ ; ಆರ್ಥಿಕ ವೆಚ್ಚದ ಅನುಮೋದನೆಗೆ ಸಂಪುಟ ಸಭೆಯ ಒಪ್ಪಿಗೆ ಪಡೆಯಲಾಗಿದೆಯೇ ; ಇಲ್ಲದೇ ಹೋದಲ್ಲಿ, ಯಾವ ನಿಯಮಾವಳಿಯ ವ್ಯಾಪ್ತಿಯಲ್ಲಿ ಕಾಮಗಾರಿಗಳನ್ನು ಅಂದಾಜು ಮಾಡಿ ಟೆಂಡರ್ ಕರೆಯಲಾಗಿದೆ ;

(ಈ) ರೂಸ (RUSA) ಯೋಜನೆಯಡಿಯಲ್ಲಿ ೨೦೧೫–೨೦೧೬ ಮತ್ತು ೨೦೧೬–೨೦೧೭ರಲ್ಲಿ ಎಷ್ಟು ಲ್ಯಾಪ್‌ಟಾಪ್‌ಗಳನ್ನು ಯಾವ ಮೊತ್ತಕ್ಕೆ ಖರೀದಿ ಮಾಡಲಾಗಿದೆ ; ಈ ಟೆಂಡರ್‌ನ್ನು ಯಾವ ಕಂಪನಿಗೆ ಮತ್ತು ಯಾವ ದರದ ಪಟ್ಟಿಗೆ ನೀಡಲಾಗಿದೆ; ಲ್ಯಾಪ್‌ಟಾಪ್‌ಗಳನ್ನು ಪೂರೈಸಲು ಕಾಲೇಜು ಶಿಕ್ಷಣ ಇಲಾಖೆ ಯಾವ ದರ್ಜೆಯ (specification) ಗುಣಮಟ್ಟವನ್ನು ಯಾವ ಕಂಪನಿಯ ಲ್ಯಾಪ್‌ಟ್ಯಾಪ್‌ಗಳನ್ನು ಪೂರೈಸಲು ಆದೇಶ ನೀಡಿತ್ತು ;

(ಉ) ಶಿಕ್ಷಣ ಇಲಾಖೆಯು ವಿದ್ಯಾರ್ಥಿಗಳಿಗೆ ಲ್ಯಾಪ್‌ಟ್ಯಾಪ್ ನೀಡಲು ಪ್ರಸಕ್ತ ಸಾಲಿನಲ್ಲಿ ಟೆಂಡರ್ ಕರೆದಿರುತ್ತದೆಯೇ ; ಇದಕ್ಕೆ ನಿಗಧಿಪಡಿಸಿರುವ ನಿಬಂಧನೆಗಳೇನು ; ನಿಯಮಾವಳಿಗಳನ್ನು ಪಾಲಿಸಲಾಗಿದೆಯೇ ; ಟ್ರೈಪಾರ್ಟಿ ಅಗ್ರಿಮೆಂಟ್ ಮೂಲಕ ಮೂಲ ಉತ್ಪಾದಕರಿಂದ ಲ್ಯಾಪ್‌ಟ್ಯಾಪ್ ಖರೀದಿಸಲಾಗಿದೆಯೇ ?

## ಗುತ್ತಿಗೆ ಆಧಾರದ ಮೇಲೆ ನಿವೃತ್ತಿ ಹೊಂದಿದವರಿಗೆ ಕಾಲ್ಪನಿಕ ವೇತನ ಬಡ್ತಿ ನೀಡಿರುವ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) –**

೪೧೮ (೪೧೪೦) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ನಿವೃತ್ತಿ ಹೊಂದಿದ ಉಪನ್ಯಾಸಕರಿಗೆ ಕಾಲ್ಪನಿಕ ವೇತನ ಬಡ್ತಿ ಸೌಲಭ್ಯ ನೀಡಲಾಗಿದೆಯೇ ; ಪದವಿ ಪೂರ್ವ ಶಿಕ್ಷಣ ಇಲಾಖೆಯ ಸರ್ಕಾರಿ ಕಾಲೇಜುಗಳಲ್ಲಿ ಗುತ್ತಿಗೆ ಆಧಾರದ ಮೇಲೆ ನೇಮಕಗೊಂಡು ನಿವೃತ್ತಿ ಹೊಂದಿದ್ದ ಉಪನ್ಯಾಸಕರಿಗೆ "ಕಾಲ್ಪನಿಕ ವೇತನ" ಬಡ್ತಿ ಸೌಲಭ್ಯ ನೀಡಲಾಗಿದೆಯೇ ; ಹಾಗಿದ್ದರೆ, ೨೦೧೭–೧೮ನೇ ಸಾಲಿನಲ್ಲಿ ನಿವೃತ್ತಿ ಹೊಂದಿದ ಉಪನ್ಯಾಸಕರ ಹಾಗೂ ಕಾಲ್ಪನಿಕ ವೇತನ ಬಡ್ತಿ ಸೌಲಭ್ಯದ ಸಂಪೂರ್ಣ ಮಾಹಿತಿ ನೀಡುವುದು;

(ಆ) ಪದವಿ ಪೂರ್ವ ಶಿಕ್ಷಣ ಇಲಾಖೆಯ ಸರ್ಕಾರಿ ಕಾಲೇಜುಗಳಲ್ಲಿ ಗುತ್ತಿಗೆ ಆಧಾರದ ಮೇಲೆ ನೇಮಕಗೊಂಡು ನಿವೃತ್ತಿ ಹೊಂದಿದ್ದ ಉಪನ್ಯಾಸಕರ ಕಾಲ್ಪನಿಕ ವೇತನ ಬಡ್ತಿಗಳನ್ನು ಕಡಿತ ಮಾಡಿ ನಿವೃತ್ತಿ ಸೌಲಭ್ಯ ನೀಡುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗೂ ಇಲಾಖೆಯ ಈ ನಿರ್ಣಯದಿಂದ ನಿವೃತ್ತಿ ಹೊಂದಿದ್ದ ಉಪನ್ಯಾಸಕರು ಆತಂಕದಲ್ಲಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಇ) ಇಲಾಖೆಯ ಕ್ರಮದಿಂದ ಜೀವನದ ಸಂಧ್ಯಾಕಾಲದಲ್ಲಿ ಇರುವ ಉಪನ್ಯಾಸಕರ ಆತಂಕ ದೂರ ಮಾಡಿ ಇವರಿಗೆ ನ್ಯಾಯಯುತವಾಗಿ ದೊರಕಬೇಕಾದ ಕಾಲ್ಪನಿಕ ವೇತನ ಬಡ್ತಿ ಯಾವುದೇ ರೀತಿಯಲ್ಲಿ ಕಡಿತ ಮಾಡದೇ ನಿವೃತ್ತಿ ಸೌಲಭ್ಯಗಳನ್ನು ನೀಡಲು ಸರ್ಕಾರ ಮುಂದಾಗುವುದೇ ? (ವಿವರ ನೀಡುವುದು)

## ರಾಜ್ಯದಲ್ಲಿನ ಪ್ರಾಥಮಿಕ ಶಾಲಾ ಮಹಿಳಾ ಶಿಕ್ಷಕರ ಕುರಿತು

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) –**

೪೧೯ (೩೮೬೪) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಮಂಜೂರಾದ ಒಟ್ಟು ಪ್ರಾಥಮಿಕ ಶಾಲಾ ಶಿಕ್ಷಕರ ಹುದ್ದೆಗಳ ಸಂಖ್ಯೆ ಎಷ್ಟು ; ಕಾರ್ಯನಿರ್ವಹಿಸುತ್ತಿರುವವರ ಸಂಖ್ಯೆ ಎಷ್ಟು ; ಅದರಲ್ಲಿ ಪುರುಷರ ಮತ್ತು ಮಹಿಳೆಯರ ಸಂಖ್ಯೆ ಎಷ್ಟು ; (ಪುರಷ/ಮಹಿಳಾ ಅನುಪಾತವೆಷ್ಟು)

(ಆ) ೨೦೧೩–೧೪ ರಿಂದ ಇಲ್ಲಿಯವರೆಗೆ ಕೊಡಮಾಡಿರುವ ರಾಜ್ಯ ಮಟ್ಟದ ಒಟ್ಟು ಶಿಕ್ಷಕ ಪ್ರಶಸ್ತಿಗಳು ಎಷ್ಟು ; ಅವುಗಳಲ್ಲಿ ಮಹಿಳೆಯರಿಗೆ ಮತ್ತು ಪುರುಷರಿಗೆ ಕೊಡಮಾಡಿರುವ ಪ್ರಶಸ್ತಿಗಳು ಎಷ್ಟು ; ರಾಷ್ಟ್ರಮಟ್ಟದ ಶಿಕ್ಷಕರ ಪ್ರಶಸ್ತಿಗೆ ಶಿಫಾರಸ್ಸು ಮಾಡಿರುವ ಮಹಿಳೆಯರ ಸಂಖ್ಯೆ ಎಷ್ಟು ; ಪುರಷ:/ಮಹಿಳಾ ಅನುಪಾತವೆಷ್ಟು;

(ಇ) ಸರ್ಕಾರದಿಂದ ಮಾನ್ಯತೆ ಪಡೆದಿರುವ ರಾಜ್ಯ ಮಟ್ಟದ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದಲ್ಲಿ ಇರುವ ಮಹಿಳಾ ಪ್ರತಿನಿಧಿಗಳ ಸಂಖ್ಯೆ ಎಷ್ಟು ;

(ಈ) ಶಿಕ್ಷಣ ಇಲಾಖೆಯಲ್ಲಿ ಬಹು ಸಂಖ್ಯಾತರಾಗಿರುವ ಮಹಿಳೆಯರಿಗೆ ಒದಗಿಸಿರುವ ಸೌಲಭ್ಯಗಳೇನು ; ರಾಜ್ಯದಲ್ಲಿರುವಂತಹ ಒಟ್ಟು ಪ್ರಾಥಮಿಕ ಶಾಲೆಗಳ ಸಂಖ್ಯೆ ಎಷ್ಟು ; ಎಷ್ಟು ಶಾಲೆಗಳಲ್ಲಿ ಪ್ರತ್ಯೇಕ ಮಹಿಳಾ ಕೊಠಡಿ ವ್ಯವಸ್ಥೆ ಇದೆ ; ಮಹಿಳೆಯರಿಗಾಗಿ ಪ್ರತ್ಯೇಕ ಅಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿದೆ ; ಇಲಾಖಾ ಕಛೇರಿಗಳಾದ ಬಿ.ಇ.ಓ., ಡಿ.ಡಿ.ಪಿ.ಐ. ಹಾಗೂ ಆಯುಕ್ತರ ಕಛೇರಿಗಳಲ್ಲಿ ಪ್ರತ್ಯೇಕ ಕೊಠಡಿ ವ್ಯವಸ್ಥೆ ಇದೆಯೇ; ಈ ವ್ಯವಸ್ಥೆ ಇಲ್ಲದೇ ಮಹಿಳೆಯರು ಸಮಸ್ಯೆಗೆ ಒಳಪಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದನ್ನು ಸರಿಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

**೨೦೧೩–೧೪ ರಿಂದ ೨೦೧೬–೧೭ರವರೆಗೆ ಶುದ್ಧ ಕುಡಿಯುವ ನೀರಿನ ಬಗ್ಗೆ**

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು)–**

೪೨೦ (೩೮೬೫) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ೨೦೧೩–೧೪ ರಿಂದ ೨೦೧೬–೧೭ನೇ ಸಾಲಿನವರೆಗೆ ಕರ್ನಾಟಕ ರಾಜ್ಯದಲ್ಲಿ ಯಾವ ಯಾವ ಇಲಾಖೆಯಿಂದ ಶುದ್ಧ ಕುಡಿಯುವ ನೀರಿನ ಘಟಕ ಸ್ಥಾಪನೆ ಮಾಡಲಾಗಿದೆ ; ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿ ಕೊಡುವುದು ; (ಹಾವೇರಿ ಜಿಲ್ಲೆಯ ತಾಲ್ಲೂಕುವಾರು ಪ್ರತ್ಯೇಕ ವಿವರ ನೀಡುವುದು)

(ಆ) ಈ ಎಲ್ಲಾ ಘಟಕಗಳನ್ನು ಯಾವ ಯಾವ ತಾಲ್ಲೂಕಿನಲ್ಲಿ ಯಾವ ಯಾವ ಏಜೆನ್ಸಿಯಿಂದ ಮಾಡಿಸಲಾಗಿದೆ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಈ ಎಲ್ಲಾ ಘಟಕಗಳಿಂದ ಜನರಿಗೆ ಶುದ್ಧ ಕುಡಿಯುವ ನೀರನ್ನು ಒದಗಿಸಲಾಗುತ್ತದೆಯೇ ; ಇದರಲ್ಲಿ ಎಷ್ಟು ಘಟಕಗಳು ಸುಸ್ಥಿತಿಯಲ್ಲಿವೆ ; ಎಷ್ಟು ಘಟಕಗಳು ಕಾರ್ಯನಿರ್ವಹಿಸುತ್ತಿಲ್ಲ ;

(ಈ) ಈ ಘಟಕಗಳು ಕಾರ್ಯನಿರ್ವಹಿಸದಿರಲು ಕಾರಣವೇನು ; ಈ ಘಟಕಗಳು ವಾರಂಟಿ ಅವಧಿಯಲ್ಲಿರುವುವೋ ಅಥವಾ ವಾರಂಟಿ ಅವಧಿ ಮುಗಿದಿರುವುದೇ; (ತಾಲ್ಲೂಕುವಾರು, ಗ್ರಾಮವಾರು ಮಾಹಿತಿ ನೀಡುವುದು)

(ಉ) ಹಾಗಿದ್ದರೆ, ಏಜೆನ್ಸಿಯವರ ಮೇಲೆ ಏನು ಕ್ರಮ ತೆಗೆದುಕೊಳ್ಳಲಾಗಿದೆ ; ಎಷ್ಟು ಏಜೆನ್ಸಿಯವರ ಮೇಲೆ ಕ್ರಮ ತೆಗೆದುಕೊಂಡಿದ್ದೀರಿ ? (ತಾಲ್ಲೂಕುವಾರು ಮಾಹಿತಿ ನೀಡುವುದು)

**ಕೆ.ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ (ಪ್ರ)
ಕರ್ನಾಟಕ ವಿಧಾನ ಪರಿಷತ್ತು.

ಸುವರ್ಣ ಸೌಧ, ಬೆಳಗಾವಿ, ಪಿ7, ಕಾ.ಸೂ. , ಪ್ರತಿಗಳು 1500